**All India Radio: Bangalore**
**Regional Bulletin In Kannada**
**22.04.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

೧. ಅಮೃತ ಭಾರತ ಯೋಜನೆಯಡಿ ಆಧುನೀಕರಣಗೊಂಡ ರಾಜ್ಯದ ೫ ರೈಲು ನಿಲ್ದಾಣಗಳ ಲೋಕಾರ್ಪಣೆ

೨. ರಾಮನಗರ ಜಿಲ್ಲೆಯನ್ನು 'ಬೆಂಗಳೂರು ದಕ್ಷಿಣ ಜಿಲ್ಲೆ' ಎಂದು ಮರುನಾಮಕರಣ ಮಾಡಲು ಸಚಿವ ಸಂಪುಟ ಸಮ್ಮತಿ

೩. ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಾರಿನ ಮೇಲೆ ದಾಳಿ ಪ್ರಕರಣ ; ರಾಜ್ಯಪಾಲರಿಗೆ ಬಿಜೆಪಿ ನಿಯೋಗ ದೂರು

೪. ಗೃಹ ಸಚಿವ ಡಾ. ಜಿ. ಪರಮೇಶ್ವರ್ ಒಡೆತನದ ಶಿಕ್ಷಣ ಸಂಸ್ಥೆಗಳ ಮೇಲೆ ಮುಂದುವರಿದ ಇಡಿ ಶೋಧ ಕಾರ್ಯ

**<><><><>**

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಅಮೃತ  ಭಾರತ ರೈಲು ನಿಲ್ದಾಣ ಯೋಜನೆಯಡಿ ಸದ್ಯ ಕಾಮಗಾರಿ ಪೂರ್ಣಗೊಂಡ ಕರ್ನಾಟಕದ ೫ ರೈಲು ನಿಲ್ದಾಣಗಳು ಸೇರಿದಂತೆ ದೇಶದ ೧೦೩ ರೈಲು ನಿಲ್ದಾಣಗಳನ್ನು ಪ್ರಧಾನಿ ನರೇಂದ್ರ ಮೋದಿ, ಇಂದು ವರ್ಚುವಲ್ ಮೂಲಕ ಲೋಕಾರ್ಪಣೆಗೊಳಿಸಿದರು.

೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೮೬ ಜಿಲ್ಲೆಗಳಲ್ಲಿ ಈ ರೈಲು ನಿಲ್ದಾಣಗಳನ್ನು ಒಂದು ಸಾವಿರದ ನೂರು ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗಿದೆ. ರಾಜಸ್ಥಾನದ ಬಿಕಾನೇರ್‌ನಲ್ಲಿ ನಡೆದ ಸಮಾರಂಭದಲ್ಲಿ ಪ್ರಧಾನಿ ನೂತನ ರೈಲ್ವೆ ನಿಲ್ದಾಣಗಳನ್ನು ಸಾರ್ವಜನಿಕ ಸೇವೆಗೆ ಸಮರ್ಪಿಸಿದರು.

ನೈರುತ್ವ ರೈಲ್ವೆ ವಿಭಾಗದ ಧಾರವಾಡ, ಗದಗ, ಬಾಗಲಕೋಟೆ, ಗೋಕಾಕ ಮತ್ತು ಮುನಿರಾಬಾದ್ ಸೇರಿದಂತೆ ವಿವಿಧ ರೈಲ್ವೆ ನಿಲ್ದಾಣಗಳನ್ನು ಅಮೃತ ಭಾರತ ಸ್ಟೇಷನ್ ಯೋಜನೆಯಡಿ ಪುನಾರಾಭಿವೃದ್ಧಿಗೊಳಿಸಲಾಗಿದೆ. ರಾಜ್ಯದ ೧೨ ಜಿಲ್ಲೆಗಳಲ್ಲಿ ಈಗಾಗಲೇ ವಂದೇ ಭಾರತ್ ರೈಲು ಸಂಚರಿಸುತ್ತಿದ್ದು, ಶೀಘ್ರದಲ್ಲಿಯೇ ಬಾಗಲಕೋಟೆಯಲ್ಲೂ ಕೂಡ ಸಂಚರಿಸಲಿದೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ಅಮೃತ್ ಭಾರತ್ ರೈಲು ನಿಲ್ದಾಣ ಯೋಜನೆಯಡಿ ಆಧುನೀಕರಣಗೊಂಡ ಬಾಗಲಕೋಟೆ ರೈಲು ನಿಲ್ದಾಣ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಈ ಯೋಜನೆಯಡಿ ರಾಜ್ಯದಲ್ಲಿ ೪೩ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಅದರಲ್ಲಿ ೧೧ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಈ ೧೧ ಯೋಜನೆಗಳಲ್ಲಿ ಬಾಗಲಕೋಟೆ-ಕುಡಚಿ, ಗದಗ-ಹುಟಗಿ, ಗದಗ-ವಾಡಿ, ರಾಯಚೂರು-ಗಿಣಿಗೇರಾ ಒಳಗೊಂಡ ಕಾಮಗಾರಿಗಳನ್ನು ೩೩ ಸಾವಿರ ಕೋಟಿ ರೂಪಾಯಿಗಳಲ್ಲಿ ಹಂತ ಹಂತವಾಗಿ ಪೂರ್ಣಗೊಳಿಸಲಾಗುವುದು ಎಂದು ಸಚಿವ ವಿ.ಸೋಮಣ್ಣ ತಿಳಿಸಿದರು.

<><><><>

ರಾಮನಗರ ಜಿಲ್ಲೆಯನ್ನು 'ಬೆಂಗಳೂರು ದಕ್ಷಿಣ ಜಿಲ್ಲೆ' ಎಂದು ಮರುನಾಮಕರಣ ಮಾಡಲು ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೫ನೇ ಸಾಲಿನ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ಪಡೆದ ಕನ್ನಡದ ಖ್ಯಾತ ಲೇಖಕಿ ಬಾನು ಮುಷ್ತಾಕ್ ಅವರಿಗೆ ಬಿಡಿಎ ದಲ್ಲಿ ಜಿ ಕೆಟಗರಿ ನಿವೇಶನ ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದರು.

ಬೆಂಗಳೂರು ಮೆಟ್ರೋ ರೈಲು ಹಂತ-೩ ಯೋಜನೆಯ ೪೦ ಸಾವಿರದ ೪೨೫ ಕೋಟಿ ರೂಪಾಯಿಗಳ ಪರಿಷ್ಕೃತ ಅಂದಾಜಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಡಿ.ಕೆ.ಶಿವಕುಮಾರ್ ಮಾಹಿತಿ ನೀಡಿದರು.

<><><><>

ಕಾಂಗ್ರೆಸ್ ಕಾರ್ಯಕರ್ತರು ಕಲಬುರುಗಿಯಲ್ಲಿ ಗೂಂಡಾಗಿರಿ ಮಾಡಿದ್ದಾರೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಶಾಸಕರು ಮತ್ತು ವಿಧಾನಪರಿಷತ್ ಸದಸ್ಯರ ನಿಯೋಗವು ಇಂದು ರಾಜ್ಯಪಾಲರನ್ನು ಭೇಟಿ ಮಾಡಿತ್ತು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆರ್.ಅಶೋಕ, ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ನಿನ್ನೆ ಕಲಬುರುಗಿಯಲ್ಲಿ ರಾಜ್ಯ ಸರಕಾರದ ವಿರುದ್ಧ ಪತ್ರಿಕಾಗೋಷ್ಠಿ ಮಾಡಿದ್ದರು. ಈ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಅವರ ಕಾರಿನ ಮೇಲೆ ಮೊಟ್ಟೆ ಒಡೆದಿದ್ದಾರೆ. ಕಾರಿನ ಮೇಲೆ ಶಾಯಿ ಎರಚಿದ್ದಾರೆ ಎಂದು ಆರೋಪಿಸಿದರು.

ಈ ಹಿಂದೆ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರ ಮೇಲೂ ಇದೇ ರೀತಿ ಘಟನೆ ನಡೆದಿತ್ತು. ಇದೀಗ ಛಲವಾದಿ ನಾರಾಯಣಸ್ವಾಮಿ ಅವರ ಮೇಲೆ ಪುನರಾವರ್ತನೆ ಆಗಿದೆ ಎಂದು ದೂರಿದರು.

ಕಲಬುರುಗಿ ಘಟನೆ ಸಂಬಂಧ ರಾಜ್ಯಪಾಲರಿಗೆ ದೂರು ಸಲ್ಲಿಸಲಾಗಿದೆ ಎಂದು ಆರ್.ಅಶೋಕ ತಿಳಿಸಿದ್ದಾರೆ.

<><><><>

ಸಣ್ಣ ಕಥೆಗಳ ಸಂಗ್ರಹವಾದ 'ಹಾರ್ಟ್ ಲ್ಯಾಂಪ್' ಮೂಲಕ ಬೂಕರ್ ಪ್ರಶಸ್ತಿ ವಿಜೇತೆ ಕನ್ನಡದ ಹಿರಿಯ ಸಾಹಿತಿ ಬಾನು ಮುಷ್ತಾಕ್ ಹಾಗೂ ಅನುವಾದಕಿ ದೀಪಾ ಭಸ್ತಿ ಅವರನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಅಭಿನಂದಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕನ್ನಡ ಕೃತಿಗೆ ಪ್ರಶಸ್ತಿ ದೊರೆತಿರುವುದು ಹೆಮ್ಮೆಯ ವಿಷಯ. ಜೊತೆಗೆ ಕನ್ನಡಕ್ಕೆ ಒಬ್ಬ ಉತ್ತಮ ಅನುವಾದಕಿ ದೊರೆತಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಧ್ವನಿ : ಪುರುಷೋತ್ತಮ ಬಿಳಿಮಲೆ

ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿರುವ ಸಾಹಿತಿ ಹಾಗೂ ಹಿರಿಯ ಪತ್ರಕರ್ತ ಜಿ.ಎನ್.ಮೋಹನ್, ಬಾನು ಮುಸ್ತಾಕ್ ಕನ್ನಡ ಮಾತ್ರವಲ್ಲ, ಇಡೀ ಭಾರತೀಯ ಸಾಹಿತ್ಯ ಲೋಕಕ್ಕೆ ಬೆಳಕನ್ನು ಹರಿಸಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಜಿ.ಎನ್.ಮೋಹನ್

<><><><>

ಉತ್ತರಕನ್ನಡ ಜಿಲ್ಲೆಯಲ್ಲಿ ಮಳೆಗಾಲ ಈ ವರ್ಷ ಬೇಗ ಶುರುವಾಗಿದ್ದು, ಈಗಾಗಲೇ ಪ್ರಗತಿಯಲ್ಲಿರುವ ಕುಡಿಯುವ ನೀರಿನ ಕಾಮಗಾರಿಕೆಯನ್ನು ಆದಷ್ಟು ಶೀಘ್ರದಲ್ಲಿ ಪೂರ್ಣಗೊಳ್ಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಉತ್ತರಕನ್ನಡ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕಾಂದೂ ಸೂಚಿಸಿದ್ದಾರೆ.

ಕಾರವಾರದಲ್ಲಿಂದು ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳಿಗೂ ನೀರಿನ ಹಂಚಿಕೆ ಸರಿಯಾಗಿ ಮಾಡಬೇಕು. ಪೈಪ್‌ಲೈನ್‌ಗಳ ಕೆಲಸಗಳು ಸಮರ್ಪಕವಾಗಿದ್ದು, ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲೂ ಕುಡಿಯುವ ನೀರಿನ ಸರಬರಾಜಿನಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶಿಸಿದರು.

ನೀರಿನ ಗುಣಮಟ್ಟವನ್ನು ಪರೀಕ್ಷಿಸಲು ನೀರಿನ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಬೇಕು. ನೀರಿನ ಪೈಪ್ ಮತ್ತು ನೀರಿನ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸಬೇಕು. ಕಲುಷಿತ ನೀರು ಪೂರೈಕೆಯಾಗದಂತೆ ಮತ್ತು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರದಂದತೆ ನೋಡಿಕೊಳ್ಳಬೇಕು ಎಂದು ಈಶ್ವರ ಕಾಂದೂ ಸೂಚಿಸಿದರು. ಮಳೆಗಾಲದ ಸಂದರ್ಭದಲ್ಲಿ ನೀರು ಕಲುಷಿತವಾಗುವ ಸಂಭವವಿರುವುದರಿಂದ ಕುಡಿಯುವ ನೀರು ಪೂರೈಸುವ ಮುನ್ನ ಭೌತಿಕ ಮತ್ತು ಜೈವಿಕ ಪರೀಕ್ಷೆಗೊಳಪಡಿಸಿ, ನೀರು ಪೂರೈಕೆಗೆ ಕ್ರಮ ವಹಿಸುವಂತೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿಜಯಪುರದಲ್ಲಿ ಜರುಗಿದ ವಿಪತ್ತು ನಿರ್ವಹಣಾ ಜಿಲ್ಲಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕುಡಿಯುವ ನೀರು ಪೂರೈಕೆಯಲ್ಲಿ ಎಚ್ಚರಿಕೆ ವಹಿಸಬೇಕು. ಕಲುಷಿತ ನೀರು ಪೂರೈಕೆಯಾಗದಂತೆ ನೋಡಿಕೊಳ್ಳಬೇಕು. ಕಲುಷಿತ ನೀರು ಪೂರೈಕೆಯಾದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಿ, ಕ್ರಮ ವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಜಿಲ್ಲೆಯಲ್ಲಿರುವ ಅಂಗನವಾಡಿ, ಶಾಲಾ ಕಟ್ಟಡಗಳ ಸ್ಥಿತಿಗತಿ ಕುರಿತು ಪರಿಶೀಲನೆ ನಡೆಸಬೇಕು. ಶಿಥಿಲಾವ್ಯವಸ್ಥೆಯಲ್ಲಿರುವ ಕಟ್ಟಡಗಳ ದುರಸ್ತಿಗೆ ಕ್ರಮ ವಹಿಸಬೇಕು. ಮಕ್ಕಳ ವಿದ್ಯಾಭ್ಯಾಸಕ್ಕೆ ಯಾವುದೇ ಅಡಚಣೆಯಾಗದಂತೆ ತಾತ್ಕಾಲಿಕವಾಗಿ ಪರ್ಯಾಯ ಕಟ್ಟಡದಲ್ಲಿ ಮಕ್ಕಳ ವಿದ್ಯಾಭ್ಯಾಸಕ್ಕೆ ವ್ಯವಸ್ಥೆ ಮಾಡಿ, ಕಟ್ಟಡ ದುರಸ್ತಿ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದರು.

<><><><>

ಗೃಹ ಸಚಿವ ಡಾ. ಜಿ. ಪರಮೇಶ್ವರ್ ಒಡೆತನದ ಸಿದ್ಧಾರ್ಥ ಶಿಕ್ಷಣ ಸಂಸ್ಥೆಗಳ ಮೇಲೆ, ಜಾರಿ ನಿರ್ದೇಶನಾಲಯ ಅಧಿಕಾರಿಗಳ ದಾಳಿ ನಡೆಸಿದ್ದು, ಶೋಧ ಕಾರ್ಯ ಇಂದೂ ಕೂಡ ಮುಂದುವರಿದಿದೆ.

ಮೂರು ಕಾಲೇಜುಗಳಲ್ಲಿ ದಾಖಲೆಗಳ ಪರಿಶೀಲನಾ ಕಾರ್ಯ ನಡೆದಿದೆ. ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಡಾ.ಪರಮೇಶ್ವರ್, ಜಾರಿ ನಿರ್ದೇಶನಾಲಯದ ಅಧಿಕಾರಿಗಳು ತಮ್ಮ ಸಂಸ್ಥೆಯ ಮೂರು ಕಾಲೇಜುಗಳಿಗೆ ಭೇಟಿ ನೀಡಿ, ಲೆಕ್ಕ ಪತ್ರಗಳ ವಿವರ ಕೇಳಿದ್ದಾರೆ. ಇಡಿ ಅಧಿಕಾರಿಗಳು ಕೇಳಿದ ಲೆಕ್ಕಪತ್ರಗಳನ್ನು ಒದಗಿಸಲು ಸಿಬ್ಬಂದಿಗೆ ಸೂಚಿಸಲಾಗಿದೆ. ತನಿಖೆಗೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ತಿಳಿಸಿದ್ದಾರೆ.

<><><><>